# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.70 : ರಾಜಗೋಪಾಲ ನಗರ

**ದಿನಾಂಕ: 17.11.2021 ರಂದು ಮಧ್ಯಾಹ್ನ 12.00 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ವೆಂಕಟೇಶ್ ಎನ್ | ಕಂದಾಯ ಮೌಲ್ಯಮಾಪಕರು |
| 4 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 5 | ನಾಗೇಶ್ ಮೂರ್ತಿ ಎಂ | ಸಹಾಯಕ ಕಾರ್ಯಪಾಲಕ ಅಭಿಯಂತರರು-ಹೆಗ್ಗನಹಳ್ಳಿ ಉಪವಿಭಾಗ |
| 6 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:- ಹೋಮ್ ಗಾರ್ಡ್‌ಗಳ ನಿಯೋಜನೆ ಬಗ್ಗೆ**

ನೋಡಲ್ ಅಧಿಕಾರಿ ರವರು ಮಾತನಾಡಿ ವಾರ್ಡ್ ನಂ.70ಕ್ಕೆ 5 ಸಂಖ್ಯೆಯ Home Guard ಗಳನ್ನು ನಿಯೋಜನೆ ಮಾಡಿದ್ದು, ಇವರನ್ನು ಮಳೆಯ ಸಮಯದಲ್ಲಿ ಬಳಸಿಕೊಳ್ಳಲು ಸೂಚಿಸಿದರು.

- **ವಿಷಯ ಸಂಖ್ಯೆ:2 :- ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಅನಧಿಕೃತ ಕಟ್ಟಡಗಳನ್ನು ಸರ್ವೇ ಮಾಡಿ ತಿಳುವಳಿಕೆ ಪತ್ರಗಳನ್ನು ನೀಡಲು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿರವರು ಆದೇಶ ನೀಡಿದ್ದು, ಅದರಂತೆ ಕಂದಾಯ ಅಧಿಕಾರಗಳ ಸಹಕಾರದೊಂದಿಗೆ ವಾರ್ಡ್ 70ರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಿರುವ/

ನಿರ್ಮಿಸುತ್ತಿರು Category-1 & 2 ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ತಿಳಿಸಿದರು.

**ವಿಷಯ ಸಂಖ್ಯೆ: 3:- ರಸ್ತೆಗುಂಡಿಗಳ ಬಗ್ಗೆ**
ರಸ್ತೆಗುಂಡಿಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಹಲವು ಕಡೆಗಳಲ್ಲಿ ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಆದರೆ ಮಳೆಯು ಬಿಡುವು ಕೊಡದೇ ಸುರಿಯುತ್ತಿದ್ದು, ಮಳೆ ನಿಂತ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- **ವಿಷಯ ಸಂಖ್ಯೆ:4**
  **ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:-**

ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶಿವಲಿಂಗಯ್ಯನವರು ಮಾತನಾಡಿ ಮಾತನಾಡಿ ವಾರ್ಡ್ ನಂ.70ರ ವ್ಯಾಪ್ತಿಯಲ್ಲಿ 19/10/2021 ರಿಂದ 17/11/2021ರವರೆಗೆ ಎಲ್ಲೆಂದರಲ್ಲಿ ಕಸ ಸುರಿಯುವವರಿಂದ ಒಟ್ಟು ರೂ.7800/-ಗಳ ದಂಡವನ್ನು ಸಂಗ್ರಹಿಸಲಾಗಿದೆ ಎಂದು ತಿಳಿಸಿದರು.

ಮುಂದುವರೆದೂ ಮಾತನಾಡಿ ಶುಚಿಮಿತ್ರ ಸಂಬಂಧ ವಾರ್ಡ್ ವ್ಯಾಪ್ತಿಯಲ್ಲಿರುವ 33 ಬ್ಲಾಕ್‌ಗಳ ಪೈಕಿ 16 ಬ್ಲಾಕ್‌ಗಳ ಸರ್ವೇ ಕಾರ್ಯ ನಡೆಸಲಾಗಿದೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಯಾವುದೇ ಕೋವಿಡ್-19 ಕೇಸ್‌ಗಳು ವಾರ್ಡ್ ವ್ಯಾಪ್ತಿಯಲ್ಲಿ ಕಂಡುಬಂದಿರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 70, ರಾಜಗೋಪಾಲ ನಗರ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.70, ರಾಜಗೋಪಾಲ ನಗರ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ